**ಕರ್ನಾಟಕ ವಿಧಾನ ಪರಿಷತ್ತು**

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 587 |
| ಸದಸ್ಯರ ಹೆಸರು | ಶ್ರೀ ಕಿಶೋರ್ ಕುಮಾರ್ ಪುತ್ತೂರ್<br>(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 20.08.2026 |
| ಉತ್ತರಿಸುವವರು | ಮುಜರಾಯಿ, ಮೀನುಗಾರಿಕೆ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು |

********

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಮುಜರಾಯಿ ದೇವಸ್ಥಾನಗಳಲ್ಲಿ ಭಕ್ತರು ಸಲ್ಲಿಸುವ ಕಾಣಿಕೆ, ನಗದು, ಚಿನ್ನ, ಬೆಳ್ಳಿ ಸುರಕ್ಷತೆ ಕುರಿತು ಏನೇನು ಕ್ರಮ ಕೈಗೊಳ್ಳಲಾಗಿದೆ; | ಸರ್ಕಾರದ ಸುತ್ತೋಲೆ ಸಂಖ್ಯೆ: ಕಂಇ 106 ಮುಅಬಿ 2026, ದಿನಾಂಕ:11.07.2026ರಲ್ಲಿ ರಾಜ್ಯದ ದೇವಾಲಯಗಳ ಹುಂಡಿ (ದೇಣಿಗೆ ಪೆಟ್ಟಿಗೆಗಳು) ಮತ್ತು ಹುಂಡಿಯಲ್ಲಿನ ನಗದು ಮತ್ತು ಇತರ ಚಿನ್ನ/ ಬೆಳ್ಳಿ ವಸ್ತುಗಳು ಇತ್ಯಾದಿಗಳ ಭದ್ರತೆ, ಪಾರದರ್ಶಕತೆ ಮತ್ತು ಹೊಣೆಗಾರಿಕೆಯನ್ನು ಖಚಿತಪಡಿಸಿಕೊಳ್ಳಲು ಮಾರ್ಗಸೂಚಿಗಳನ್ನು (SOP) ಹೊರಡಿಸಲಾಗಿರುತ್ತದೆ.<br><br>ಸದರಿ ಸುತ್ತೋಲೆಯಲ್ಲಿ ಧಾರ್ಮಿಕ ದತ್ತಿ ಇಲಾಖೆಯ ದೇವಾಲಯಗಳ ಚರಾಸ್ತಿಗಳ ಸಂರಕ್ಷಣೆ ಬಗ್ಗೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವ ನಿಟ್ಟಿನಲ್ಲಿ ಈ ಕೆಳಕಂಡ ಮುನ್ನೆಚ್ಚರಿಕೆ / ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲು ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ; ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು, ಉಪ ವಿಭಾಗಾಧಿಕಾರಿಗಳು, ತಹಸೀಲ್ದಾರ್‌ಗಳು, ಧಾರ್ಮಿಕ ದತ್ತಿ ಇಲಾಖೆಯ ಪ್ರಾಧಿಕಾರಿಗಳ ಕಾರ್ಯದರ್ಶಿಗಳು / ಎಲ್ಲಾ ಕಾರ್ಯ ನಿರ್ವಾಹಕ ಅಧಿಕಾರಿಗಳು / ಸಹಾಯಕ ಆಯುಕ್ತರು / ಮುಜರಾಯಿ ತಹಸೀಲ್ದಾರ್ / ಅನುವಂಶಿಕ ಮೋಕ್ತೇಸರರು / ಆಡಳಿತಾಧಿಕಾರಿಗಳು ಮತ್ತು ಇತರ ಎಲ್ಲಾ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗಿದೆ.<br><br>i. ದೇವಾಲಯಗಳ ವಿವಿಧ ಸೂಕ್ತ ಜಾಗಗಳನ್ನು ಗುರುತಿಸಿ, ಎಲ್ಲರಿಗೂ ಕಾಣುವಂತೆ ಹುಂಡಿಗಳನ್ನು ಅಳವಡಿಸಿ, ಸೂಕ್ತ ಭದ್ರತೆ ಒದಗಿಸುವುದು.<br><br>ii. ದೇವಾಲಯದಲ್ಲಿ ಅಳವಡಿಸುವ ಹುಂಡಿಗಳು ನಾಲ್ಕು ದಿಕ್ಕಿನಿಂದ ಕಾಣುವಂತೆ ಅಗತ್ಯವಾದ ಸಿಸಿ ಟಿವಿ Web ಕ್ಯಾಮರಾಗಳನ್ನು ಕಡ್ಡಾಯವಾಗಿ ಅಳವಡಿಸಿ, Serverನಲ್ಲಿ ಸಂರಕ್ಷಿಸುವುದು. ಜಿಲ್ಲಾಧಿಕಾರಿಗಳ ಉಪ ವಿಭಾಗಾಧಿಕಾರಿಗಳ ಕಚೇರಿಯಲ್ಲಿನ ಮುಜರಾಯಿ ವಿಭಾಗದಲ್ಲಿ ಸದರಿ ಕ್ಯಾಮರಾಗಳನ್ನು Monitor ಮಾಡುವುದು.<br><br>iii. ದೇವಾಲಯಗಳಲ್ಲಿ ಹಾಲಿ ಅಳವಡಿಸಿರುವ ಸಿಸಿಟಿವಿ, ಡಿವಿಆರ್‌ಗಳನ್ನು ಕಳ್ಳತನ, ನಿಷ್ಕ್ರಿಯ, ಧ್ವಂಸ ಮಾಡುತ್ತಿರುವುದರಿಂದ |

ಹಾಗೂ ಕರ್ಪೂರವನ್ನು ಹಚ್ಚಿ ಅದರಿಂದ ಬರುವ Carbon ನಿಂದ ಕ್ಯಾಮರಾ Lens ಗ್ಲಾಸ್ ಕಾಣದಂತೆ ಮಾಡಿ ಕಳ್ಳತನ ಮಾಡುವುದನ್ನು ತಡೆಗಟ್ಟುವ ಹಿತದೃಷ್ಟಿಯಿಂದ CCTV Web Camera ಗಳನ್ನು ಅಳವಡಿಸುವುದು.

iv. ಧಾರ್ಮಿಕ ದತ್ತಿ ಇಲಾಖೆಯ ಕೇಂದ್ರ ಕಛೇರಿಯಲ್ಲಿ ಸರ್ವರ್ (Server) ಅನ್ನು ಅಳವಡಿಸಿ, ವಸತಿ ಕೋಶದ ವತಿಯಿಂದ ವೆಬ್ ಕ್ಯಾಮೆರಾ (Web Camera)ಗಳ ಮೂಲಕ ಎಲ್ಲಾ ದೇವಾಲಯಗಳಲ್ಲಿ ಅಳವಡಿಸಿರುವ ಕ್ಯಾಮರಾಗಳ ಮೇಲ್ವಿಚಾರಣೆ ನಡೆಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.

v. ಭದ್ರತಾ ಹಿತದೃಷ್ಟಿಯಿಂದ ದೇವಾಲಯ ಗಳಲ್ಲಿ ಅಳವಡಿಸಿರುವ ಸಿಸಿ ಟಿವಿ Web ಕ್ಯಾಮರಾಗಳ ಸಂಪರ್ಕವನ್ನು ಸಂಬಂಧಪಟ್ಟ ಜಿಲ್ಲಾಧಿಕಾರಿಗಳು, ಪೋಲೀಸ್ ಅಧೀಕ್ಷಕರು ಮತ್ತು ಪೋಲೀಸ್ ಠಾಣೆಯ ಕಛೇರಿಗಳಿಗೆ ಸಂಪರ್ಕ ಕಲ್ಪಿಸಿ, ಅವುಗಳ ವೀಕ್ಷಣೆಗಾಗಿ ಸಂಚಾರ ನಿಯಂತ್ರಣ ಕೊಠಡಿಯಲ್ಲಿರುವಂತೆ ಡ್ಯಾಶ್‌ಬೋರ್ಡ್‌ಗಳ ವ್ಯವಸ್ಥೆಯನ್ನು ಕಲ್ಪಿಸುವುದು.

vi. ಎಲ್ಲಾ ದೇವಾಲಯಗಳಲ್ಲಿ ಭಕ್ತಾದಿಗಳು ನಗದು ಅಥವಾ ಬ್ಯಾಗ್ / ಚೀಲವನ್ನು ಹೊತ್ತು ಬಂದಾಗ ಜನಸಂದಣಿಯಲ್ಲಿ ಜೇಬು ಕಳ್ಳತನದಂತಹ ಘಟನೆಗಳನ್ನು ಕಡಿಮೆ ಮಾಡಲು ಡಿಜಿಟಲ್ ಪಾವತಿ ವ್ಯವಸ್ಥೆಗೆ ಹೆಚ್ಚಿನ ಉತ್ತೇಜನ ನೀಡಲು QR Code ಅಳವಡಿಸುವುದು. QR Codeನ ಅಡಿಯಲ್ಲಿ ಸಂಬಂಧಪಟ್ಟ ಬ್ಯಾಂಕ್‌ನ ವಿವರಗಳನ್ನು (IFSC, ಇತ್ಯಾದಿ) ಅಳವಡಿಸುವುದು.

vii. ಡಿಜಿಟಲ್ ದೇಣಿಗೆ ಮತ್ತು ನಗದು ರಹಿತ ಪಾವತಿಗಳನ್ನು ಸುಗಮಗೊಳಿಸಲು, ಭಕ್ತರು ಮತ್ತು ಸಂದರ್ಶಕರು ದೇಣಿಗೆ ನೀಡಲು, ಪ್ರಸಾದ, ಸೇವಾ ಟಿಕೆಟ್‌ಗಳು ಮತ್ತು ಇತರ ದೇವಾಲಯ ಸೇವೆಗಳನ್ನು ನಗದು ರಹಿತ ವಿಧಾನಗಳ ಮೂಲಕ ಖರೀದಿಸಲು ದೇವಾಲಯಗಳಲ್ಲಿ ಸುರಕ್ಷಿತ UPI, BHIM, QR ಕೋಡ್ ಮತ್ತು ಇತರ ಡಿಜಿಟಲ್ ಪಾವತಿ ಸೌಲಭ್ಯಗಳನ್ನು ಒದಗಿಸುವುದು.

viii. ದೇವಾಲಯಗಳಲ್ಲಿ ಪಾರದರ್ಶಕತೆ, ಬಳಕೆಯ ಸುಲಭತೆ, ಸರಿಯಾದ ಲೆಕ್ಕಪರಿಶೋಧನಾ ಹಾದಿ ಮತ್ತು ಸುಧಾರಿತ ಹಣಕಾಸು ನಿರ್ವಹಣೆಯನ್ನು ಖಚಿತಪಡಿಸಿಕೊಳ್ಳಲು ಡಿಜಿಟಲ್ ಪಾವತಿ

| | | | |
|---|---|---|---|
| | | | ವ್ಯವಸ್ಥೆಯನ್ನು ದೇವಾಲಯದ ಲೆಕ್ಕಪತ್ರ ವ್ಯವಸ್ಥೆಯೊಂದಿಗೆ ಸಂಯೋಜಿಸುವುದು. |
| | | | ix. ಹುಂಡಿ ಇರುವ ಕಡೆ ಮಾತ್ರ QR Code ಅನ್ನು ಅಳವಡಿಸುವುದು. |
| | | | x. ಕೆಲವು ದೇವಾಲಯಗಳಲ್ಲಿ ಹುಂಡಿಗಳಿಗೆ ಅಳವಡಿಸುವ QR Code ಗಳನ್ನು ದುರುಪಯೋಗಪಡಿಸಿಕೊಳ್ಳುತ್ತಿರುವುದಾಗಿ ತಿಳಿದು ಬಂದಿರುವುದರಿಂದ ಇದನ್ನು ತಡೆಗಟ್ಟುವ ನಿಟ್ಟಿನಲ್ಲಿ QR Code ಅನ್ನು ಹಾಳು ಮಾಡದಂತೆ / ಅದರ ಮೇಲೆ ಪ್ರತ್ಯೇಕವಾಗಿ ಬೇರೆ QR Code ಅನ್ನು ಅಳವಡಿಸಲು ಸಾಧ್ಯವಾಗದಂತೆ ಇವುಗಳನ್ನು ಸಂರಕ್ಷಿಸಲು ದೇವಾಲಯದ ಅಧಿಕಾರಿಗಳು ಕಾಲ ಕಾಲಕ್ಕೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು. |
| | | | xi. ಹುಂಡಿ ಎಣಿಕೆಯಲ್ಲಿ ಕಂದಾಯ ಅಧಿಕಾರಿಗಳು ಕಡ್ಡಾಯವಾಗಿ ಭಾಗವಹಿಸಲು ಹುಂಡಿ ಎಣಿಕೆ ದಿನಾಂಕಗಳನ್ನು ಮುಂಚಿತವಾಗಿಯೇ ಕ್ಯಾಲೆಂಡರ್‌ನಲ್ಲಿ HUNDI COUNTING ದಿನಗಳನ್ನು ನಿಗದಿಪಡಿಸುವುದು. |
| | | | xii. ಹೆಚ್ಚು ದೇಣಿಗೆ / ಕಾಣಿಕೆ ಬರುವ ದೇವಾಲಯಗಳಲ್ಲಿ ವಾರಕ್ಕೆ ಒಂದು ದಿವಸ ಹಾಗೂ ಸಾಧಾರಣ ದೇಣಿಗೆ / ಕಾಣಿಕೆ ಬರುವ ದೇವಾಲಯಗಳಲ್ಲಿ ಎರಡು ವಾರಕ್ಕೆ ಒಂದು ದಿವಸ ಕಡ್ಡಾಯವಾಗಿ ಹುಂಡಿ ಎಣಿಕೆ ದಿನಾಂಕಗಳನ್ನು ಮುಂಚಿತವಾಗಿಯೇ ಕ್ಯಾಲೆಂಡರ್‌ನಲ್ಲಿ HUNDI COUNTING ದಿನಗಳನ್ನು ನಿಗದಿಪಡಿಸುವುದು. |
| | | | xiii. ಹುಂಡಿ ಎಣಿಕೆಯನ್ನು ಸಂಬಂಧಪಟ್ಟ ತಹಶೀಲ್ದಾರ್ ಮೇಲ್ವಿಚಾರಣೆಯಲ್ಲಿ ನಡೆಸುವುದು |
| | | | xiv. ಹುಂಡಿ ಎಣಿಕೆ ಸಂದರ್ಭದಲ್ಲಿ ಸ್ವೀಕೃತವಾಗಬಹುದಾದ ಚಿನ್ನ/ ಬೆಳ್ಳಿ ಇತ್ಯಾದಿ ವಸ್ತುಗಳನ್ನು ಎಣಿಕೆ ದಿನದಂದೇ ಕಡ್ಡಾಯವಾಗಿ ಮೌಲ್ಯಮಾಪನ ಮಾಡಿಸಿ ಅಂದೇ ಸಂಬಂಧಪಟ್ಟ ಜಿಲ್ಲಾ ಉಪ ಖಜಾನೆಯಲ್ಲಿ, ಸೂಕ್ತ ಮೇಲ್ವಿಚಾರಣೆ ಯೊಂದಿಗೆ ಜಮಾ ಮಾಡತಕ್ಕದ್ದು. |
| | | | xv. ಹುಂಡಿ ಎಣಿಕೆ ಸಮಯದಲ್ಲಿ ಹಾಜರಿರುವ ಸಿಬ್ಬಂದಿ ಮತ್ತು ಅಧಿಕಾರಿಗಳನ್ನು ಖಚಿತಪಡಿಸಿಕೊಳ್ಳಲು Face Recognition ಅನ್ನು ಅಳವಡಿಸುವುದು ಮತ್ತು ಸದರಿ ಸಿಬ್ಬಂದಿ ಮತ್ತು ಅಧಿಕಾರಿಗಳು ಎಣಿಕೆಗೆ |

| | | |
|---|---|---|
| | | ಪ್ರವೇಶಿಸುವ ಸಂದರ್ಭದಲ್ಲಿ Cash in hand ಅನ್ನು ಘೋಷಿಸುವುದು.<br>xvi. ಹುಂಡಿ ತೆರೆಯುವುದರಿಂದ, ಹುಂಡಿ ಎಣಿಕೆ ಮಾಡಿ ಬ್ಯಾಂಕಿಗೆ ಹಸ್ತಾಂತರಿಸುವವರೆಗೆ ಸಂಪೂರ್ಣವಾಗಿ ವಿಡಿಯೋ ಚಿತ್ರೀಕರಣ ವನ್ನು ದಿನಾಂಕ ಮತ್ತು ಸಮಯ ದಾಖಲೆಯಾಗುವಂತೆ ಕಡ್ಡಾಯವಾಗಿ ಚಿತ್ರೀಕರಿಸುವುದು.<br>xvii. ಹುಂಡಿ ಎಣಿಕೆ ಪ್ರಕ್ರಿಯೆಯ ಸಂದರ್ಭದಲ್ಲಿ, ಸ್ಥಳಾಂತರಿಸಬಹುದಾದ ಹುಂಡಿಯನ್ನು ಸ್ಥಳಾಂತರಿಸುವುದರಿಂದ ಪ್ರಾರಂಭಿಸಿ, ಹುಂಡಿ ಹಣವನ್ನು ಹುಂಡಿಯಿಂದ ಹೊರ ತೆಗೆಯುವ ಹಾಗೂ ಹುಂಡಿ ಎಣಿಕೆಯಲ್ಲಿ ಭಾಗವಹಿಸುವ ಪ್ರತಿಯೊಬ್ಬ ಸಿಬ್ಬಂದಿಗೆ ಎಣಿಕೆ ಮಾಡಲು ನೀಡುವ ಹಣ ಮತ್ತು ಅವರು ಎಣಿಕೆ ಮಾಡಿದ ನಂತರ ಹಿಂದಿರುಗಿಸುವವರೆಗೆ ಸಂಪೂರ್ಣವಾಗಿ ವಿಡಿಯೋ ಚಿತ್ರೀಕರಣ ವನ್ನು ದಿನಾಂಕ ಮತ್ತು ಸಮಯ ದಾಖಲೆಯಾಗುವಂತೆ ಕಡ್ಡಾಯವಾಗಿ ಚಿತ್ರೀಕರಿಸುವುದು.<br>xviii. ಹುಂಡಿ ಎಣಿಕೆಗೆ ಸಾರ್ವಜನಿಕರ ಸೇವೆಯನ್ನು ಪಡೆಯುವುದರ ಬದಲಿಗೆ ಕಡ್ಡಾಯವಾಗಿ ಗೃಹ ರಕ್ಷಕದಳದ ಸಿಬ್ಬಂದಿಗಳ / ಬ್ಯಾಂಕ್ ಸಿಬ್ಬಂದಿ/ ಸರ್ಕಾರಿ ನೌಕರರ ಸೇವೆಯನ್ನು ಪಡೆಯುವುದು. ಖಾಸಗಿ /ಸಾರ್ವಜನಿಕರ ಸೇವೆಯನ್ನು ಹುಂಡಿ ಎಣಿಕೆಗೆ ಪಡೆಯತಕ್ಕದ್ದಲ್ಲ.<br>xix. ಹುಂಡಿಗಳ ಎಣಿಕೆ ಸಮಯದಲ್ಲಿ ಮತ್ತು ಹುಂಡಿಗಳಲ್ಲಿ ಕಳ್ಳತನದ ಪ್ರಕರಣಗಳು ಕಂಡು ಬಂದಲ್ಲಿ ಸಂಬಂಧಪಟ್ಟ ದೇವಾಲಯದ ಅಧಿಕಾರಿಗಳು ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳನ್ನು ನೇರ ಹೊಣೆಗಾರರನ್ನಾಗಿ ಮಾಡಲಾಗುವುದು. |
| ಆ) | ರಾಜ್ಯದ ಪ್ರಮುಖ ದೇವಾಲಯಗಳಲ್ಲಿ ಭಕ್ತರಿಗೆ ಅಗತ್ಯವಾದ ಮೂಲಭೂತ ಸೌಲಭ್ಯಗಳಾದ ವಿಶ್ರಾಂತಿ ಕೊಠಡಿಗಳು, ಶೌಚಾಲಯಗಳು, ಶುದ್ಧ ಕುಡಿಯುವ ನೀರು, ಅನ್ನದಾಸೋಹ/ ಊಟ-ಉಪಹಾರದ ವ್ಯವಸ್ಥೆ, ವಾಹನ ನಿಲುಗಡೆ, ಮಾಹಿತಿ ಕೇಂದ್ರಗಳು ಸೇರಿದಂತೆ ವಿವಿಧ ಸೌಲಭ್ಯಗಳ ಕೊರತೆ ಇದೆ ಎಂಬ ದೂರುಗಳು ಇದ್ದು, ಇದನ್ನು ಸರಿಪಡಿಸಲು ಏನೇನು ಕ್ರಮ ಕೈಗೊಳ್ಳಲಾಗಿದೆ; | ಧಾರ್ಮಿಕ ದತ್ತಿ ಇಲಾಖಾ ವ್ಯಾಪ್ತಿಗೆ ಒಳಪಡುವ ಅಧಿಸೂಚಿತ ಸಂಸ್ಥೆಗಳಿಗೆ ಬರುವ ಭಕ್ತಾದಿಗಳಿಗೆ/ ಸಾರ್ವಜನಿಕರಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಬಗ್ಗೆ ಆಯುಕ್ತರ ಕಛೇರಿಯಿಂದ 32 ಅಂಶಗಳನ್ನು ಒಳ ಗೊಂಡಂತೆ ಸುತ್ತೋಲೆ ಸಂಖ್ಯೆ: ಸಿಎನ್ಆರ್/1/ಸಿಆರ್/346/2010-11, ದಿನಾಂಕ: 22.03.2011ರಲ್ಲಿ ಹೊರಡಿಸಲಾ ಗಿರುತ್ತದೆ ಹಾಗೂ ಈ ಕೆಳಕಂಡ ಮೂಲಭೂತ ಸೌಕರ್ಯಗಳನ್ನು ಸಹ ಒದಗಿಸಲಾಗಿರುತ್ತದೆ. |

| | | |
|---|---|---|
| | | 1. ದೇವಾಲಯದಲ್ಲಿ ಮಾರ್ಗದರ್ಶನ ನೀಡುವ ಫಲಕಗಳನ್ನು ಅಳವಡಿಸಲಾಗಿರುತ್ತದೆ.<br>2. ದೇವಾಲಯಕ್ಕೆ ಭೇಟಿ ನೀಡುವ ಹಿರಿಯ ನಾಗರಿಕರು ಮತ್ತು ಕುಟುಂಬಗಳು ವಿಶ್ರಮಿಸಲು ಆಸನದ ವ್ಯವಸ್ಥೆ.<br>3. ದೇವಾಲಯಕ್ಕೆ ಬರುವ ಭಕ್ತಾಧಿಗಳಿಗೆ ನೆರಳಿನ ವ್ಯವಸ್ಥೆ.<br>4. ದೇವಾಲಯಗಳಲ್ಲಿ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ (RO Plant).<br>5. ಶೌಚಾಲಯಗಳ ವ್ಯವಸ್ಥೆ.<br>6. ದೇವಾಲಯಗಳಲಿ CCTV ಗಳ ವ್ಯವಸ್ಥೆ.<br>7. ವಿಶೇಷ ಚೇತನರು ಹಾಗೂ ಹಿರಿಯ ನಾಗರೀಕರಿಗೆ ಪ್ರತ್ಯೇಕ ಸರದಿ ಸಾಲಿನಲ್ಲಿ ನೇರ ದರ್ಶನ ವ್ಯವಸ್ಥೆಯನ್ನು ಕಲ್ಪಿಸಲಾಗಿರುತ್ತದೆ.<br>8. ಪ್ರವರ್ಗ 'ಎ' ಮತ್ತು 'ಬಿ' ದೇವಾಲಯಗಳಲ್ಲಿ ತಾಯಂದಿರು ಹಾಲುಣಿಸಲು ಪ್ರತ್ಯೇಕ ಕೊಠಡಿ ವ್ಯವಸ್ಥೆ ಹಾಗೂ ಒಂದು ವರ್ಷದೊಳಗಿನ ಚಿಕ್ಕ ಮಕ್ಕಳಿರುವ ತಾಯಂದಿರಿಗೆ ನೇರ ದರ್ಶನದ ವ್ಯವಸ್ಥೆ.<br>9. ದೇವಾಲಯಗಳ ಸ್ವಚ್ಛತೆ ಮತ್ತು ಕ್ಷೇತ್ರದ ಪಾವಿತ್ರ್ಯತೆಯನ್ನು ಕಾಪಾಡುವ ನಿಟ್ಟಿನಲ್ಲಿ 2025ನೇ ಆಗಸ್ಟ್ 15ನೇ ತಾರೀಖಿನಿಂದ ಅನ್ವಯವಾಗುವಂತೆ ಸಂಪೂರ್ಣವಾಗಿ ಪ್ಲಾಸ್ಟಿಕ್ ನಿಷೇಧವನ್ನು ಜಾರಿಗೆ ತರಲು ಇಲಾಖೆಯ ಎಲ್ಲಾ ದೇವಾಲಯಗಳಿಗೆ ಸುತ್ತೋಲೆ ಮೂಲಕ ಸೂಚನೆ ನೀಡಲಾಗಿದೆ.<br>10. ಧಾರ್ಮಿಕ ದತ್ತಿ ಇಲಾಖೆ ವ್ಯಾಪ್ತಿಗೆ ಬರುವ ದೇವಾಲಯಗಳಲ್ಲಿ ಭಕ್ತಾಧಿಗಳಿಗೆ ಪ್ರಸಾದ ತಯಾರಿಕೆ ಮತ್ತು ವಿತರಿಸುವ ಕುರಿತು ಧಾರ್ಮಿಕ |

| | | |
|---|---|---|
| | | ದತ್ತಿ ಆಯುಕ್ತರು ದಿನಾಂಕ: 02.06.2010ರ ಸುತ್ತೋಲೆಯನ್ನು ಜಾರಿಗೊಳಿಸಿರುತ್ತಾರೆ.<br>12. ದೇವಾಲಯಗಳಿಗೆ ಸೇರಿದ ಜಾಗ ಮತ್ತು ಸ್ಥಳಾವಕಾಶದ ಲಭ್ಯತೆಗೆ ಅನುಗುಣವಾಗಿ ಸಾರ್ವಜನಿಕ ಭಕ್ತಾದಿಗಳಿಗೆ ವಾಹನ ನಿಲುಗಡೆ ವ್ಯವಸ್ಥೆ, ಮಾಹಿತಿ ಕೇಂದ್ರಗಳ ವ್ಯವಸ್ಥೆ ಸೇರಿದಂತೆ ವಿವಿಧ ಸೌಲಭ್ಯಗಳನ್ನು ಕಲ್ಪಿಸುವುದಕ್ಕೆ ಕ್ರಮವಹಿಸಲಾಗುತ್ತಿದೆ. |
| ಇ) | ತಿರುಪತಿಯ ಕರ್ನಾಟಕ ಭವನದಲ್ಲಿ ಕರ್ನಾಟಕದಿಂದ ತೆರಳುವ ಭಕ್ತರಿಗೆ ಕೊಠಡಿಗಳು ಲಭ್ಯವಾಗುತ್ತಿಲ್ಲ ಹಾಗೂ ಕೊಠಡಿ ಹಂಚಿಕೆಯಲ್ಲಿ ತೊಂದರೆಗಳಾಗುತ್ತಿವೆ ಎಂಬ ದೂರುಗಳು ಸರ್ಕಾರದ ಗಮನಕ್ಕೆ ಬಂದಿವೆಯೇ; ಬಂದಿದ್ದಲ್ಲಿ ದೂರುಗಳ ಸಂಖ್ಯೆ ಮತ್ತು ಅವುಗಳ ವಿವರ ನೀಡುವುದು; | ಆಂಧ್ರಪ್ರದೇಶ ತಿರುಮಲ ಕರ್ನಾಟಕ ರಾಜ್ಯ ಛತ್ರದ ವಸತಿ ಗೃಹದಲ್ಲಿರುವ ಕೊಠಡಿಗಳನ್ನು ಯಾತ್ರಾರ್ಥಿಗಳು 90 ದಿನಗಳ ಮುಂಚಿತವಾಗಿ www.Karnatakatemplesaccommodation.comನ Online Web Portal ಮೂಲಕ ಕಾಯ್ದಿರಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.<br>ತಿರುಮಲ ಕರ್ನಾಟಕ ರಾಜ್ಯ ಛತ್ರದ ವಸತಿ ಗೃಹಗಳಲ್ಲಿ ಲಭ್ಯವಿರುವ ಕೊಠಡಿಗಳಲ್ಲಿ ಶೇಕಡ 80ರಷ್ಟು ಆನ್ ಲೈನ್ ಮೂಲಕ ಮತ್ತು ಶೇಡ 20ರಷ್ಟು ಆಫ್ ಲೈನ್ ಮೂಲಕ ಕಾಯ್ದಿರಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.<br>ಛತ್ರದ ವಸತಿಗೃಹದ ಕೊಠಡಿಗಳನ್ನು ಘನತೆವೆತ್ತ ಲೋಕಭವನ ಕಾರ್ಯಾಲಯ / ಮಾನ್ಯ ಮುಖ್ಯಮಂತ್ರಿಗಳು / ಮಾನ್ಯ ನ್ಯಾಯಾಧೀಶರು / ಮಾನ್ಯ ಕೇಂದ್ರ ಸಚಿವರು / ಮಾನ್ಯ ಸಚಿವರುಗಳ / ಮಾನ್ಯ ಶಾಸಕರುಗಳ ಕಛೇರಿಗಳಿಂದ ನೀಡುವ ಶಿಫಾರಸ್ಸು ಪತ್ರಗಳಿಗೆ ಆದ್ಯತೆಯನ್ನು ನೀಡಿ, ಕೊಠಡಿಗಳ ಲಭ್ಯತೆಗೆ ಅನುಗುಣವಾಗಿ ಯಾತ್ರಾರ್ಥಿಗಳಿಗೆ ಆಫ್‌ಲೈನ್ ಮೂಲಕ ಹಂಚಿಕೆ ಮಾಡಲಾಗುತ್ತಿದೆ.<br>ತಿರುಮಲ, ಕರ್ನಾಟಕ ರಾಜ್ಯ ಛತ್ರದ ಅತಿಥಿ ಗೃಹ ಮತ್ತು ಕಲ್ಯಾಣ ಮಂಟಪದಲ್ಲಿನ ಅವ್ಯವಸ್ಥೆ / ಹೆಚ್ಚುವರಿ ಬಾಡಿಗೆ ವಸೂಲಾತಿ, ಸರಿಯಾದ ನಿರ್ವಹಣೆ ಇಲ್ಲದಿರುವ ಕುರಿತು ಶ್ರೀಮತಿ ಬಿ.ಎಂ ರಾಧಾ, ಮುಳಬಾಗಿಲು ತಾಲ್ಲೂಕು, ಕೋಲಾರ ಜಿಲ್ಲೆ ಇವರು TTDಗೆ ಮತ್ತು ಸರ್ಕಾರಕ್ಕೆ ದೂರು ಅರ್ಜಿಗಳನ್ನು |

| | | |
|---|---|---|
| | | ಸಲ್ಲಿಸಿರುತ್ತಾರೆ ಹಾಗೂ ಶ್ರೀ ಅಭಿಲಾಷ್ ಎಂಬುವವರು TTDಗೆ ಮೇಲ್ ಮೂಲಕ ದೂರು ಸಲ್ಲಿಸಿರುತ್ತಾರೆ. |
| ಈ) | ದೇವಸ್ಥಾನಗಳಲ್ಲಿ ಕಾಣಿಕೆ, ನಗದು, ಚಿನ್ನಾಭರಣ ಹಾಗೂ ಇತರೆ ಅಮೂಲ್ಯ ವಸ್ತುಗಳ ಕಳ್ಳತನ ಅಥವಾ ದುರುಪಯೋಗವನ್ನು ತಡೆಯಲು ಸಿಸಿ ಟಿವಿ, ಡಿಜಿಟಲ್ ಲೆಕ್ಕಪತ್ರ ವ್ಯವಸ್ಥೆ, ಭದ್ರತಾ ಸಿಬ್ಬಂದಿ, ಆಡಿಟ್ ಹಾಗೂ ಇತರೆ ಸುರಕ್ಷತಾ ಕ್ರಮಗಳನ್ನು ಕಡ್ಡಾಯಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಉಪ ಪ್ರಶ್ನೆ (ಅ)ರಲ್ಲಿ ಉತ್ತರ ಒದಗಿಸಿರುವಂತೆ, ಸರ್ಕಾರದ ಸುತ್ತೋಲೆ ಸಂಖ್ಯೆ: ಕಂಇ 106 ಮುಅಬಿ 2026, ದಿನಾಂಕ:11.07.2026ರಲ್ಲಿನ ನಿರ್ದೇಶನಗಳನ್ವಯ ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಮುಂದುವರೆದು, ಧಾರ್ಮಿಕ ದತ್ತಿ ಇಲಾಖೆಗೆ ಒಳಪಟ್ಟಿರುವ ಪ್ರವರ್ಗ 'ಎ' ಮತ್ತು 'ಬಿ' ಅಧಿಸೂಚಿತ ಸಂಸ್ಥೆಗಳಲ್ಲಿ ಗಣಕೀಕೃತ ಮಾರ್ಗದ ಮೂಲಕ ಸೇವಾ ರಸೀದಿಗಳನ್ನು ನೀಡುವ/ ವಿತರಿಸುವ ಬಗ್ಗೆ ದಿನಾಂಕ:13.04.2015ರಂದು ಧಾರ್ಮಿಕ ದತ್ತಿ ಆಯುಕ್ತರು ಸುತ್ತೋಲೆ ಹೊರಡಿಸಿದ್ದು, ಅದರಂತೆ ಆದಾಯ ಸಂಗ್ರಹಣೆಯಲ್ಲಿ ಪಾರದರ್ಶಕತೆ ತರಲು ಕ್ರಮ ವಹಿಸಲಾಗಿದೆ.<br><br>ಕರ್ನಾಟಕ ಸರ್ಕಾರವು The Private Security Agencies (Regulation) Act-2005 ಅನ್ನು ಅಳವಡಿಸಿಕೊಂಡು ಸದರಿ ಕಾಯ್ದೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವ ಸಲುವಾಗಿ The Private Security Agencies (Karnataka) Rules, 2008 ಅನ್ನು ಜಾರಿಗೊಳಿಸಿರುತ್ತದೆ. ಅದರನ್ವಯ, ಕೆಟಿಪಿಪಿ ಕಾಯ್ದೆ ಮತ್ತು ನಿಯಮಗಳನ್ನು ಅನುಸರಿಸಿ ಧಾರ್ಮಿಕ ದತ್ತಿ ಇಲಾಖೆಯ ವ್ಯಾಪ್ತಿಗೆ ಒಳಪಡುವ ಅಧಿಸೂಚಿತ ಸಂಸ್ಥೆಗಳಿಗೆ ಖಾಸಗಿ ಭದ್ರತಾ ಸಿಬ್ಬಂದಿಗಳನ್ನು ನಿಯೋಜಿಸಿಕೊಳ್ಳುವುದಕ್ಕೆ ದಿನಾಂಕ:18.12.2012ರಂದು ಧಾರ್ಮಿಕ ದತ್ತಿ ಆಯುಕ್ತರು ಸುತ್ತೋಲೆ ಹೊರಡಿಸಿದ್ದು, ಅದರಂತೆ ದೇವಾಲಯಗಳ ಸುರಕ್ಷತೆಗೆ ಕ್ರಮ ವಹಿಸಲಾಗಿದೆ.<br><br>ಪ್ರಸ್ತುತ, ಧಾರ್ಮಿಕ ದತ್ತಿ ಇಲಾಖೆಯ ದೇವಾಲಯಗಳಿಗೆ ಸಂಬಂಧಿಸಿದಂತೆ, ಡಿಜಿಟಲ್ ಲೆಕ್ಕಪತ್ರ ವ್ಯವಸ್ಥೆಯನ್ನು ಅಳವಡಿಸಿಕೊಳ್ಳಲಾಗಿರುವುದಿಲ್ಲ. ಆದರೆ, ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಅಧಿನಿಯಮ, 1997ರ ಕಲಂ 37ರಡಿಯಲ್ಲಿ ಇಲಾಖೆಗೆ ಸೇರಿದ ದೇವಾಲಯಗಳ ಲೆಕ್ಕಪತ್ರಗಳನ್ನು ರಾಜ್ಯ ಲೆಕ್ಕಪತ್ರಗಳ ಇಲಾಖೆಯ ವತಿಯಿಂದ ಲೆಕ್ಕ ಪರಿಶೋಧನೆ ಮಾಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |

ಉ) ಭಕ್ತರಿಗೆ ಉತ್ತಮ ಸೇವೆ ಒದಗಿಸುವ ಉದ್ದೇಶದಿಂದ ದೇವಸ್ಥಾನಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಅಭಿವೃದ್ಧಿಪಡಿಸಲು ಸರ್ಕಾರವು ರೂಪಿಸಿರುವ ಯೋಜನೆಗಳೇನು; ಇದಕ್ಕಾಗಿ ಜಿಲ್ಲಾವಾರು ಮೀಸಲಿಟ್ಟಿರುವ ಅನುದಾನ ಎಷ್ಟು? (ವಿವರ ನೀಡುವುದು)

ಭಕ್ತರಿಗೆ ಉತ್ತಮ ಸೇವೆ ಒದಗಿಸುವ ಉದ್ದೇಶದಿಂದ ದೇವಸ್ಥಾನಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಅಭಿವೃದ್ಧಿಪಡಿಸಲು ಹಾಗೂ ದೇವಾಲಯಗಳ ದುರಸ್ಥಿ ಜೀರ್ಣೋದ್ಧಾರಕ್ಕಾಗಿ 2026-27ನೇ ಸಾಲಿನಲ್ಲಿ ಈ ಕೆಳಕಂಡಂತೆ ಒಟ್ಟು ರೂ.9500.00 ಲಕ್ಷಗಳ ಅನುದಾನವನ್ನು ಸರ್ಕಾರದ ಆಯವ್ಯಯದಲ್ಲಿ ಮೀಸಲಿರಿಸಿದೆ:-

| ಕ್ರ. ಸಂ. | ಲೆಕ್ಕ ಶೀರ್ಷಿಕೆ | ಉದ್ದೇಶ | ಮೀಸಲಿರಿಸಿರುವ ಅನುದಾನ (ರೂ. ಲಕ್ಷಗಳಲ್ಲಿ) |
|---|---|---|---|
| 1 | 2250-00-103-5-12-103- | ದೇವಾಲಯಗಳು ಮತ್ತು ಇತರೆ ಧಾರ್ಮಿಕ ಸಂಸ್ಥೆಗಳು-ಸಹಾಯಾನುದಾನ-ಸಾಮಾನ್ಯ (ಖಾಸಗಿ ದೇವಸ್ಥಾನಗಳಿಗೆ ಅನುದಾನ) | 250.00 |
| 2 | 2250-00-103-5-12-200 | ದೇವಾಲಯಗಳು ಮತ್ತು ಇತರೆ ಧಾರ್ಮಿಕ ಸಂಸ್ಥೆಗಳು-ನಿರ್ವಹಣಾ ವೆಚ್ಚ (ಮುಜರಾಯಿ ದೇವಸ್ಥಾನಗಳಿಗೆ ಅನುದಾನ) | 1250.00 |
| 3 | 2250-00-103-5-12-200 | ದೇವಾಲಯಗಳು ಮತ್ತು ಇತರೆ ಧಾರ್ಮಿಕ ಸಂಸ್ಥೆಗಳು-ನಿರ್ವಹಣಾ ವೆಚ್ಚ 'ಜಲನಿಧಿ ಕಲ್ಯಾಣಿಗಳ ಪುನಃಶ್ಚೇತನ | 500.00 |
| 4 | 2250-00-103-5-14-103- | ರಾಜ್ಯದಲ್ಲಿನ ವಿವಿಧ ಮಠಗಳು ಹಾಗೂ ದೇವಾಲಯಗಳಿಗೆ ಮುಖ್ಯಮಂತ್ರಿಗಳ ವಿಶೇಷ ಸಹಾಯಧನ - ಸಹಾಯಾನುದಾನ-ಸಾಮಾನ್ಯ | 5000.00 |
| 5 | 4059-80-051-0-52-386-132 | ಧಾರ್ಮಿಕ ಸ್ಥಳಗಳಲ್ಲಿ ಮೂಲಭೂತ ಸೌಕರ್ಯ ಹಾಗೂ ವಸತಿ ವ್ಯವಸ್ಥೆ / ಇತರೆ (ಮುಜರಾಯಿ ದೇವಸ್ಥಾನಗಳಿಗೆ ಅನುದಾನ) | 700.00 |
| | | ವಾರಣಾಸಿಯಲ್ಲಿ ಛತ್ರ ನಿರ್ಮಾಣ | 500.00 |
| | | ಮಂತ್ರಾಲಯದಲ್ಲಿ ಛತ್ರ ನಿರ್ಮಾಣ | 500.00 |

| | | | |
|---|---|---|---|
| | | ಶ್ರೀ ಶೈಲಂ ಕ್ಷೇತ್ರದಲ್ಲಿ ಯಾತ್ರಿ ನಿವಾಸ ನಿರ್ಮಾಣ | 500.00 |
| | | ತುಳಜಾಪುರ ಕ್ಷೇತ್ರದಲ್ಲಿ ಯಾತ್ರಿ ನಿವಾಸ | 300.00 |
| | | **ಒಟ್ಟು** | **9500.00** |

ಮುಂದುವರೆದು, ದೇವಾಲಯಗಳ ದುರಸ್ಥಿ/ ಜೀರ್ಣೋದ್ಧಾರ/ ನವ ನಿರ್ಮಾಣಕ್ಕಾಗಿ 2026-27ನೇ ಸಾಲಿನಲ್ಲಿ ಪ್ರತಿ ವಿಧಾನ ಸಭಾ ಕ್ಷೇತ್ರಕ್ಕೆ ಈ ಕೆಳಕಂಡಂತೆ ಯೋಜನೆವಾರು ಅನುದಾನ ಮೀಸಲಿರಿಸಲಾಗಿರುತ್ತದೆ:-

| **ಕ್ರ. ಸಂ.** | **ಯೋಜನೆ** | **ಪ್ರತಿ ವಿಧಾನ ಸಭಾ ಕ್ಷೇತ್ರಕ್ಕೆ (ರೂ. ಲಕ್ಷಗಳಲ್ಲಿ)** | **ಆಯವ್ಯಯದಲ್ಲಿ ಒದಗಿಸಿರುವ ಒಟ್ಟು ಅನುದಾನ (ರೂ. ಲಕ್ಷಗಳಲ್ಲಿ)** |
|---|---|---|---|
| 1 | ಆರಾಧನಾ | 4.32 | 968.00 |
| 2 | ಪರಿಶಿಷ್ಟ ಜಾತಿ ಉಪಯೋಜನೆ | 4.41 | 990.00 |
| 3 | ಗಿರಿಜನ ಉಪಯೋಜನೆ | 1.08 | 242.00 |

ಸಂಖ್ಯೆ: ಕಂಇ 165 ಮುಸಪ್ರ 2026

(ಕೆ.ಎಸ್.ಬಸವಂತಪ್ಪ)
ಮುಜರಾಯಿ ,ಮೀನುಗಾರಿಕೆ,ಬಂದರು ಮತ್ತು ಒಳನಾಡು
ಜಲಸಾರಿಗೆ ಸಚಿವರು